**ಓ.ಎಸ್ ನಂ. 145/2025**

**ಡಿ.ಡಬ್ಲ್ಯೂ: 1**

**ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ 25-08-2026 ರಂದು ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ ಡಿಜಿಪಿ ಯವರಿಂದಃ-**

ನಾನು ಸಲ್ಲಿಸುತ್ತಿರುವ ಪ್ರಮಾಣ ಪತ್ರದಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಮತ್ತು ಪ್ರಮಾಣಪತ್ರದಲ್ಲಿರುವ ವಿಷಯಗಳು ನಾನೇ ಹೇಳಿ ಬರೆಸಿರುತ್ತೇನೆ. ಈ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಭಾಗವಾಗಿ ಪರಿಗಣಿಸಲು ಹಾಜರುಪಡಿಸಿರುತ್ತೇನೆ.

ಶಾಲಾ ರಿಜಿಸ್ಟರನ್ನು ಹಾಜರುಪಡಿಸಿದ್ದು ಅದನ್ನು ನಿ.ಡಿ-1 ಎಂದು, ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಡಿ-2 ಎಂದು, ಶಾಲಾ ದಾಖಲಾತಿಯ ರಿಜಿಸ್ಟರ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಡಿ-3 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ- ವಾದಿ ಪರ ಶ್ರೀ ವಿ ಜಿ ಎ ನ್ಯಾಯವಾದಿಯವರಿಂದಃ-**

ವಾದಿಯ ಹೆಸರನ್ನು ಶಾಲಾ ದಾಖಲಾತಿಗೆ ಸೇರಲು ಯಾರು ಮಾಹಿತಿಯನ್ನು ಕೊಟ್ಟಿದ್ದರು ಎಂದರೆ ಸಾಕ್ಷಿ ಪಾಲಕರು ಕೊಟ್ಟಿದ್ದಾರೆ ಎಂದು ನುಡಿಯುತ್ತಾರೆ. ಸಂತೋಷ್ ಅರುಣ್ ಮುತ್ತುಸ್ವಾಮಿ ಅವರ ಹೆಸರನ್ನು ಸಂತೋಷ ಅರುಣ್ ನಾಯ್ಕ ಎಂದು ಬದಲಾಯಿಸಲು ಪೂರಕ ದಾಖಲೆಗಳು ಇದ್ದರೆ ನನ್ನದೇನು ಅಭ್ಯಂತರ ಇಲ್ಲ.

ಮರು ವಿಚಾರಣೆ ಇಲ್ಲ.

**(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ,**

**ಸಿವಿಲ್ ನ್ಯಾಯಾಧೀಶರು ಕಾರವಾರ**